KARNATAKA SUCCESS NO 1
Kannada Daily
ಸಂಪಾದಕರು/ಮಾಲೀಕರು
ರಾಧಿಕಾ ಎ.ಆರ್.
Volume: 02 Issue-126
ಮಂಗಳವಾರ 18 ಮಾರ್ಚ್ 2025
Price: 2.00 Rs. Pages - 2

RNI: KARKAN/2023/88508

# ಕರ್ನಾಟಕ ಸಕ್ಸಸ್ ನಂ 1

ಕನ್ನಡ ದಿನಪತ್ರಿಕೆ

ನಮ್ಮ ಸಂಪರ್ಕ: ಇ-ಮೇಲ್: karnatakasuccessno1ar@gmail.com ಮೊಬೈಲ್: 9380988530, 9606988508

## ಬೆಳ್ಳಾರ ವೃತ್ತಕ್ಕೆ 'ಪುನೀತ್' ಹೆಸರು



ಹುಳಿಯಾರು: ಹುಳಿಯಾರು ಹೋಬಳಿಯ ಬೆಳ್ಳಾರ ಗ್ರಾಮದಲ್ಲಿ ಚಿತ್ರನಟ ಪುನೀತ್ ರಾಜ್‌ಕುಮಾರ್ ರವರ 50 ನೇ ಹುಟ್ಟು ಹಬ್ಬವನ್ನು ಸೋಮವಾರ ಸಡಗರ ಸಂಭ್ರಮದಿಂದ ಆಚರಿಸಲಾಯಿತು. ಈ ಹಿನ್ನಲೆಯಲ್ಲಿ ಬೆಳ್ಳಾರ ಗ್ರಾಮದ ವೃತ್ತಕ್ಕೆ ಪುನೀತ್ ರಾಜ್‌ಕುಮಾರ್ ವೃತ್ತ ಎಂದು ನಾಮಕರಣ ಮಾಡಿ ಕೇಕ್ ಕತ್ತರಿಸಿ ಸಿಹಿ ಹಂಚಿ ನೆಚ್ಚಿನ ನಾಯಕ ನಟನ ಹುಟ್ಟು ಹಬ್ಬವನ್ನು ಸಂಭ್ರಮಿಸಿದರು. ಗ್ರಾಪಂ ಅಧ್ಯಕ್ಷೆ ರಾಧರಾಜು, ಚಿಕ್ಕನಾಯಕನಹಳ್ಳಿ ರೇಣುಕಾಂಬ ಸಹಕಾರ ಸಂಘದ ಅಧ್ಯಕ್ಷ ಬೆಳ್ಳಾರ ಎಸ್.ಮಲ್ಲಿಕಾರ್ಜುನಯ್ಯ, ವಕೀಲ ಮೋಹನ್, ಪೋಸ್ಟ್ ಕೃಷ್ಣಪ್ಪ, ಗ್ರಾಪಂ ಸದಸ್ಯರಾದ ಲಕ್ಕೇನಹಳ್ಳಿ ರಘುವೀರ್, ಹೊಯ್ಸಳಕಟ್ಟೆ ಕಾಂತರಾಜು, ಬೆಳ್ಳಾರ ಗೊಲ್ಲರಹಟ್ಟಿ ಚಿಕ್ಕಣ್ಣ, ಆರ್ಯ ಈಡಿಗರ ಸಂಘದ ತಾಲೂಕು ಅಧ್ಯಕ್ಷ ಎನ್.ಜಿ.ನಾಗರಾಜು, ಕಾರ್ಯದರ್ಶಿ ಸೋಮಣ್ಣ, ಜಿಲ್ಲಾ ಸಂಘದ ಸದಸ್ಯ ನಾರಾಯಣ ಸ್ವಾಮಿ ಇತರರು ಉಪಸ್ಥಿತರಿದ್ದರು.

## ಎಂ.ಜಿ.ರಸ್ತೆಯ ಕನ್ಸರ್‌ವೆನ್ಸಿ ಪಾರ್ಕಿಂಗ್ ವ್ಯವಸ್ಥೆಗೆ ಮಾತ್ರ: ಶಾಸಕ ಜ್ಯೋತಿಗಣೇಶ್



ತುಮಕೂರು ನಗರದ ಎಂ.ಜಿ.ರಸ್ತೆಯ ಕನ್ಸರ್‌ವೆನ್ಸಿಯ ಜಾಗಗಳಲ್ಲಿ ಮಹಾನಗರಪಾಲಿಕೆಯ ವತಿಯಿಂದ ಪಾರ್ಕಿಂಗ್ ವ್ಯವಸ್ಥೆ ಮಾಡುವಂತೆ ಸೂಚಿಸಲಾಗಿದೆ. ಇದರಲ್ಲಿ ಯಾವುದೇ ಬದಲಾವಣೆ ಇಲ್ಲ. ತುಮಕೂರು ನಗರವು ಅತ್ಯಂತ ವೇಗವಾಗಿ ಬೆಳೆಯುತ್ತಿರುವ ನಗರವಾಗಿದ್ದು, ಸಾರ್ವಜನಿಕರಿಗೆ ಅನುಕೂಲವಾಗಲು ಎಂ.ಜಿ.ರಸ್ತೆಯ ಕನ್ಸರ್‌ವೆನ್ಸಿಗಳಲ್ಲಿ ಪಾರ್ಕಿಂಗ್ ವ್ಯವಸ್ಥೆ ಮಾಡಲು ಮಹಾನಗರಪಾಲಿಕೆಗೆ ಸೂಚಿಸಿಲಾಗಿದೆ. ಈ ಹಿಂದೆ ಮಹಾನಗರಪಾಲಿಕೆ ಸಾಮಾನ್ಯ ಸಭೆಯಲ್ಲಿಯೂ ಸಹ ಈ ತೀರ್ಮಾನವನ್ನು ಮಾಡಲಾಗಿದ್ದು, ಇದರಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ ಎಂದು ತುಮಕೂರು ನಗರದ ಶಾಸಕರಾದ ಶ್ರೀ ಜಿ.ಬಿ.ಜ್ಯೋತಿಗಣೇಶ್ ರವರು ತಿಳಿಸಿದ್ದಾರೆ.

ಎಂ.ಜಿ.ರಸ್ತೆಯ ವರ್ತಕರು ಹಾಗೂ ನಿವಾಸಿಗಳು ಶಾಸಕರನ್ನು ದೂರವಾಣಿ ಮೂಲಕ ಸಂಪರ್ಕ ಮಾಡಿದ ಸಂದರ್ಭದಲ್ಲಿ ಕನ್ಸರ್‌ವೆನ್ಸಿಗಳಲ್ಲಿ ಪುಟ್‌ಬಾತ್ ವ್ಯಾಪಾರಿಗಳಿಗೆ ಅವಕಾಶ ನೀಡಲು ಮಹಾನಗರಪಾಲಿಕೆ ಸಿದ್ಧತೆ ನಡೆಸಿದ್ದು, ನಮ್ಮ ರಕ್ಷಣೆ ಮಾಡಬೇಕು. ತುಮಕೂರು ಮಹಾನಗರಪಾಲಿಕೆಗೆ ಲಕ್ಷಾಂತರ ರೂಪಾಯಿಗಳನ್ನು ತೆರಿಗೆ ಪಾವತಿ ಮಾಡಿ ಎಂ.ಜಿ.ರಸ್ತೆಯಲ್ಲಿ ವ್ಯಾಪಾರ ಮಾಡುತ್ತಿದ್ದು, ಕೋವಿಡ್ ಸಂದರ್ಭದಲ್ಲಿ ಹಲವಾರು ಜನರು ಸಾಲವನ್ನು ಮಾಡಿ ತೀರಿಸಲಾಗದೆ ಮನೆ ಆಸ್ತಿಗಳನ್ನು ಮಾರಿ ಸಾಲ ತೀರಿಸಿದ್ದಾರೆ. ಮತ್ತಷ್ಟು ಜನರು ಸಾಲದ ಸುಳಿಯಲ್ಲಿ ಸಿಲುಕಿ ಊರನ್ನೇ ತೊರೆದಿದ್ದಾರೆ. ಇಂತಹ ಸಂಕಷ್ಟದಲ್ಲಿರುವ ನಮಗೆ ಮಾರಕವಾಗುವಂತಹ ಕನ್ಸರ್‌ವೆನ್ಸಿಗಳಲ್ಲಿ ಹಾಗೂ ಎಂ.ಜಿ.ರಸ್ತೆಯ ಮುಂಭಾಗದಲ್ಲಿ ಪುಟ್‌ಬಾತ್ ವ್ಯಾಪಾರಿಗಳಿಗೆ ಅವಕಾಶ ಮಾಡುವುದನ್ನು ಕೈಬಿಡಬೇಕೆಂದರು. ಎಂ.ಜಿ.ರಸ್ತೆಯ ನಿವಾಸಿಗಳು ಮಾತನಾಡಿ ಶತಮಾನಗಳಿಂದಲೂ ಸಹ ನಮ್ಮ ಪೂರ್ವಜರು ಎಂ.ಜಿ.ರಸ್ತೆಯಲ್ಲಿಯೇ ವಾಸವಿದ್ದು, ಕನ್ಸರ್‌ವೆನ್ಸಿಯನ್ನು ನಾವು ಉಪಯೋಗಿಸಲು ನಮಗೆ ಹಕ್ಕಿದೆ. ದಯವಿಟ್ಟು ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸಿ, ತೆರಿಗೆದಾರರ / ನಿವಾಸಿಗಳ ಹಿತ ಕಾಪಾಡಬೇಕು, ಪುಟ್‌ಬಾತ್ ವ್ಯಾಪಾರಿಗಳಿಗೆ ಬೇರೆ ಸ್ಥಳಗಳಲ್ಲಿ ಜಾಗ ನೀಡಲು ಮಹಾನಗರಪಾಲಿಕೆಯವರಿಗೆ ತಿಳಿಸಬೇಕೆಂದು ಶಾಸಕರ ಬಳಿ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಸಾರ್ವಜನಿಕರೊಂದಿಗೆ ಮಾತನಾಡಿದ ಮಾನ್ಯ ಶಾಸಕರು ಮಹಾನಗರಪಾಲಿಕೆಯ ಸಭೆಗಳಲ್ಲಿ ಈ ಹಿಂದೆಯೇ ದಿನಾಂಕ:25.05.2021 ರಂದು ಎಂ.ಜಿ.ರಸ್ತೆ ಹಾಗೂ ಜನರಲ್ ಕಾರಿಯಪ್ಪ ರಸ್ತೆಯ ಕನ್ಸರ್‌ವೆನ್ಸಿಗಳಲ್ಲಿ ಯುವುದೇ ವಾಣಿಜ್ಯ ವಹಿವಾಟುಗಳನ್ನು ನಡೆಸದೇ ಕೇವಲ ಪಾರ್ಕಿಂಗ್ ವ್ಯವಸ್ಥೆಗೆ ಅನುಕೂಲವಾಗುವಂತೆ ಮಹಾನಗರಪಾಲಿಕೆ ಆಯುಕ್ತರಿಗೆ ಸೂಚಿಸಲಾಗಿತ್ತು. ಎಂ.ಜಿ.ರಸ್ತೆ ಹಾಗೂ ಕನ್ಸರ್‌ವೆನ್ಸಿ ಸಂಬಂಧಿಸಿದಂತೆ ಸಾಮಾನ್ಯ ಸಭೆಗಳಲ್ಲಿ ಪ್ರಸ್ತಾವನೆಯಾಗಿದ್ದು, ದಿನಾಂಕ:26.08.2021 ರಂದು ಮಹಾನಗರಪಾಲಿಕೆಯಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿಯೂ ಸಹ ಇದರ ಬಗ್ಗೆ ಅಂದು ಮಹಾನಗರಪಾಲಿಕೆ ಸದಸ್ಯರುಗಳು ಸ್ಥಳಾವಕಾಶ ನೀಡಲು ಸಾಧ್ಯವಿಲ್ಲ ಎಂದು ಸಾಧಕ ಭಾಧಕಗಳ ಚರ್ಚೆಯನ್ನು ನಡೆಸಿಯೇ ಪಾರ್ಕಿಂಗ್ ವ್ಯವಸ್ಥೆಗೆ ಕಾಯ್ದಿರಿಸಲು ತೀರ್ಮಾನಿಸಲಾಗಿತ್ತು. ನೀವುಗಳು ಯಾವುದೇ ಆತಂಕ ಪಡುವುದು ಬೇಡ. ಬೇರೆ ಸ್ಥಳಗಳಲ್ಲಿ ಪುಟ್‌ಬಾತ್ ವ್ಯಾಪಾರಿಗಳಿಗೆ ವ್ಯಾಪಾರ ನಡೆಸಲು ಜಾಗ ಗುರುತಿಸಲು ಈ ಹಿಂದೆಯೇ ಸೂಚಿಸಲಾಗಿದ್ದು, ಎಂ.ಜಿ.ರಸ್ತೆಯ ಕನ್ಸರ್‌ವೆನ್ಸಿಗಳಲ್ಲಿ ಯಾವುದೇ ಕಾರಣಕ್ಕೂ ಪುಟ್‌ಬಾತ್ ವ್ಯಾಪಾರಿಗಳಿಗೆ ಅವಕಾಶ ನೀಡುವುದಿಲ್ಲ ಎಂದು ಎಂ.ಜಿ.ರಸ್ತೆಯ ನಾಗರೀಕರಿಗೆ ಹಾಗೂ ವಾಣಿಜ್ಯ ಮಳಿಗೆಗಳ ವ್ಯಾಪಾರಸ್ಥರಿಗೆ ನಗರ ಶಾಸಕರು ಧೈರ್ಯ ತುಂಬಿದರು.

ಸಾರ್ವಜನಿಕರಿಗೆ ಪಾರ್ಕಿಂಗ್‌ನಿಂದ ಅನುಕೂಲ: ಕನ್ಸರ್‌ವೆನ್ಸಿಗಳಲ್ಲಿ ಪಾರ್ಕಿಂಗ್ ವ್ಯವಸ್ಥೆ ಮಾಡಿದರೆ ಸಾರ್ವಜನಿಕರಿಗೆ ಅನುಕೂಲ, ಸಾವಿರಾರು ದ್ವಿಚಕ್ರ ವಾಹನಗಳು ಪ್ರತಿನಿತ್ಯ ತುಮಕೂರು ನಗರದಲ್ಲಿ ನಿಲುಗಡೆಯಾಗುತ್ತಿದ್ದು, ಶಿಸ್ತು ಬದ್ಧವಾಗಿ ಎಂ.ಜಿ.ರಸ್ತೆ, ಎಂ.ಜಿ.ರಸ್ತೆ ಕನ್ಸರ್‌ವೆನ್ಸಿ, ಜನರಲ್ ಕಾರಿಯಪ್ಪ ರಸ್ತೆ, ರೈಲ್ವೆ ನಿಲ್ದಾಣದ ರಸ್ತೆ, ರೈಲ್ವೆ ನಿಲ್ದಾಣದ ಬಳಿ, ಸಬ್‌ರಿಜಿಸ್ಟ್ರರ್ ಆಫೀಸ್, ಕೋರ್ಟ್ ಹತ್ತಿರ, ಡಿ.ಸಿ.ಆಫೀಸ್ ಬಳಿ ಹೀಗೆ ಜನ ಸಂಚಾರವಿರುವ ಸ್ಥಳಗಳಲ್ಲಿ ಸಾರ್ವಜನಿಕರಿಗೆ ಪಾರ್ಕಿಂಗ್ ವ್ಯವಸ್ಥೆ ಮಾಡಿದರೆ ಅನುಕೂಲವಾಗುವುದು ಎಂಬುದಾಗಿ ಶಾಸಕರು ತಿಳಿಸಿದರು.

## ಬೆಳಿಗ್ಗೆ 6 ಗಂಟೆಯಿಂದಲೇ ಪಡಿತರ ವಿತರಣೆಗೆ ಜಿಲ್ಲಾಧಿಕಾರಿ ಸೂಚನೆ



ತುಮಕೂರು: ದಿನೇ ದಿನೇ ಬಿಸಿಲಿನ ಝಳ ಹೆಚ್ಚಾಗುತ್ತಿರುವುದರಿಂದ ಪಡಿತರ ಧಾನ್ಯ ವಿತರಿಸಲು ನ್ಯಾಯಬೆಲೆ ಅಂಗಡಿಗಳು ಬೆಳಿಗ್ಗೆ 6 ಗಂಟೆಯಿಂದಲೇ ಕಾರ್ಯನಿರ್ವಹಿಸುವಂತೆ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಜಂಟಿ ನಿರ್ದೇಶಕ ಮಂಟೇಸ್ವಾಮಿ ಅವರಿಗೆ ಸೂಚನೆ ನೀಡಿದರು.

ಪಾವಗಡ ಪಟ್ಟಣದ ಶ್ರೀರಾಮಕೃಷ್ಣ ನ್ಯಾಯಬೆಲೆ ಅಂಗಡಿಗೆ ಭಾನುವಾರ ಬೆಳಿಗ್ಗೆ ಭೇಟಿ ನೀಡಿ ಕುಟುಂಬದ ಪ್ರತಿ ಸದಸ್ಯರಿಗೆ 15 ಕೆ.ಜಿ. ಅಕ್ಕಿ ಸಮರ್ಪಕ ವಿತರಣೆ ಬಗ್ಗೆ ಪರಿಶೀಲಿಸಿ ಮಾತನಾಡಿದ ಅವರು, ಗಂಟೆಗಟ್ಟಲೆ ಬಿಸಿಲಿನಲ್ಲಿ ಕಾಯದೆ ಫಲಾನುಭವಿಗಳಿಗೆ ಅನುಕೂಲವಾಗುವಂತೆ ಎಲ್ಲಾ ನ್ಯಾಯಬೆಲೆ ಅಂಗಡಿಗಳನ್ನು ನಿಗಧಿತ ಸಮಯಕ್ಕಿಂತ ಒಂದು ಗಂಟೆ ಮುಂಚಿತವಾಗಿ ತೆರೆಯುವ ವ್ಯವಸ್ಥೆ ಮಾಡಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರಲ್ಲದೆ, ಪಡಿತರ ಧಾನ್ಯ ಪಡೆಯಲು ನ್ಯಾಯಬೆಲೆ ಅಂಗಡಿ ಮುಂದೆ ಸಾಲು ಗಟ್ಟಿ ನಿಂತಿದ್ದ ಪಡಿತರ ಧಾನ್ಯದ ಗುಣಮಟ್ಟ ಹಾಗೂ ಕ್ರಮವಾಗಿ ವಿತರಿಸುತ್ತಿರುವ ಬಗ್ಗೆ ಫಲಾನುಭವಿಗಳಿಂದ ಮಾಹಿತಿ ಪಡೆದರು.

ನಂತರ ನಾಗಲಮಡಿಕೆ ಕ್ರಾಸ್ ಬಳಿ ಭೇಟಿ ನೀಡಿ ತುಂಗಭದ್ರಾ ಕುಡಿಯುವ ನೀರಿನ ಯೋಜನೆಯಡಿ ಪಟ್ಟಣ ಪ್ರದೇಶದಲ್ಲಿ ಪ್ರಾಯೋಗಿಕ ನೀರು ಸರಬರಾಜಾಗುತ್ತಿರುವ ಬಗ್ಗೆ ಸ್ಥಳ ಪರಿಶೀಲನೆ ಮಾಡಿದರು. ನೀರು ಸರಬರಾಜು ಮಾಡುವ ಪೈಪ್‌ಲೈನ್‌ನಲ್ಲಿ ಸೋರಿಕೆಯನ್ನು ಕಂಡ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಅಗತ್ಯಕ್ರಮ ಕೈಗೊಳ್ಳಬೇಕೆಂದು ತಿಳಿಸಿದರಲ್ಲದೆ, ಪೈಪ್‌ಲೈನ್ ಹೊಡೆದು ಹಾಕಿರುವವರಿಗೆ ತಕ್ಷಣವೇ ನೋಟಿಸ್ ನೀಡಬೇಕೆಂದು ಸೂಚನೆ ನೀಡಿದರು.

ಜನತೆಗೆ ಶುದ್ಧ ಕುಡಿಯುವ ನೀರು ಮನೆ ಮನೆಗೆ ಪೂರೈಕೆ ಮಾಡುವ ನಿಟ್ಟಿನಲ್ಲಿ ತುಂಗಭದ್ರಾ ಕುಡಿಯುವ ನೀರಿನ ಯೋಜನೆಯ ಕಾಮಗಾರಿಯನ್ನು ಆದಷ್ಟು ಬೇಗ ಪೂರ್ಣಗೊಳಿಸಬೇಕೆಂದು ಅವರು ಸೂಚಿಸಿದರು. ನಂತರ ನಾಗಲಮಡಿಕೆ ಗ್ರಾಮದಲ್ಲಿ ಜೆಜೆಎಂ ಯೋಜನೆ ಹಾಗೂ ಪಿಎಂ ಆವಾಸ್ ವಸತಿ ಯೋಜನೆ ಕಾಮಗಾರಿ ಪ್ರಗತಿಯನ್ನು ಪರಿಶೀಲಿಸಿದರು.

ಪಾವಗಡ ತಾಲೂಕಿನ ತಿರುಮಣಿಯಲ್ಲಿರುವ ಸೌರಶಕ್ತಿ ಘಟಕಕ್ಕೆ ಭೇಟಿ ನೀಡಿ ಘಟಕದ ನಿರ್ವಹಣೆ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದರು.

ಪಾವಗಡ ವ್ಯಾಪ್ತಿಯ ಕೆ. ರಾಮಪುರ ರೈಲ್ವೆ ನಿಲ್ದಾಣಕ್ಕೆ ಭೇಟಿ ನೀಡಿ ತುಮಕೂರು–ರಾಯದುರ್ಗ ರೈಲು ಮಾರ್ಗ ಕಾಮಗಾರಿ ಪ್ರಗತಿ ಕುರಿತು ಇಲಾಖೆಯ ಅಧಿಕಾರಿಗಳಿಂದ ಮಾಹಿತಿ ಪಡೆದರು.

ಮಧುಗಿರಿ ತಾಲ್ಲೂಕು ಎಂ. ಬಸವನಹಳ್ಳಿ ಅಂಗನವಾಡಿ ಕೇಂದ್ರವನ್ನು ವೀಕ್ಷಿಸಿದ ಅವರು, ನಂತರ ಚಿನಕವಜ್ರ ಗ್ರಾಮದಲ್ಲಿರುವ ಆಯುಷ್ಮಾನ್ ಆರೋಗ್ಯ ಮಂದಿರಕ್ಕೆ ಭೇಟಿ ಮಾಡಿ ಚಿಕಿತ್ಸಾ ವಿಧಾನಗಳನ್ನು ಗಮನಿಸಿದರು. ಸ್ವನಿಧಿ ಯೋಜನೆಯಡಿ ರಾಜ್ಯಮಟ್ಟದಿಂದ ಪ್ರಶಂಸೆ ದೊರೆತಿರುವ ಹಿನ್ನೆಲೆಯಲ್ಲಿ ಮಧುಗಿರಿಯ ಪುರಸಭೆಗೆ ಭೇಟಿ ನೀಡಿ ಅಧಿಕಾರಿ/ಸಿಬ್ಬಂದಿಗಳನ್ನು ಅಭಿನಂದಿಸಿದರು.

ಈ ಸಂದರ್ಭದಲ್ಲಿ ಉಪವಿಭಾಗಾಧಿಕಾರಿ ಗೋಟೂರು ಶಿವಪ್ಪ, ತಹಶೀಲ್ದಾರರಾದ ಡಿ.ಎನ್ ವರದರಾಜು, ಶಿರಿನ್ ತಾಜ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಚೇತನ್ ಕುಮಾರ್ ಹಾಗೂ ಕಾರ್ಯಕ್ರಮ ನಿರೂಪಣಾಧಿಕಾರಿ ದಿನೇಶ್, ಕಂದಾಯ ನಿರೀಕ್ಷಕ ಕಿರಣ್ ಕುಮಾರ್, ಸಿಡಿಪಿಒ ಸುನಿತಾ, ಸೇರಿದಂತೆ ಮತ್ತಿತರ ಅಧಿಕಾರಿಗಳು ಹಾಜರಿದ್ದರು.

## 'ಸ್ಪರ್ಧಾತ್ಮಕ ಜಗತ್ತಿಗೆ ಕಂಪ್ಯೂಟರ್ ಜ್ಞಾನ ಅನಿವಾರ್ಯ'



ತುಮಕೂರು: ಸ್ಪರ್ಧಾತ್ಮಕ ಜಗತ್ತಿಗೆ ಕಂಪ್ಯೂಟರ್ ಜ್ಞಾನ ಮತ್ತು ಅದರ ಬಳಕೆ ಅನಿವಾರ್ಯ. ವಿದ್ಯಾಭ್ಯಾಸದ ಸಮಯ ದಿಂದಲೇ ವಿದ್ಯಾರ್ಥಿಗಳು ಕಂಪ್ಯೂಟರ್ ಜ್ಞಾನ ಪಡೆದುಕೊಂಡರೆ ಭವಿಷ್ಯ ಉಜ್ವಲವಾಗುವುದು ಎಂದು ತುಮಕೂರು ವಿ.ವಿ. ಪರೀಕ್ಷಾಂಗ ಕುಲಸಚಿವ ಪ್ರೊ. ಪ್ರಸನ್ನ ಕುಮಾರ್ ಕೆ. ಹೇಳಿದರು.

ವಿಶ್ವವಿದ್ಯಾನಿಲಯದ ವಿಜ್ಞಾನ ಕಾಲೇಜಿನ ಕಂಪ್ಯೂಟರ್ ವಿಜ್ಞಾನ ವಿಭಾಗವು ಸೋಮವಾರ ಆಯೋಜಿಸಿದ್ದ ಕೃತಕ ಬುದ್ಧಿಮತ್ತೆ ಕುರಿತ ಒಂದು ದಿನದ ರಾಷ್ಟ್ರೀಯ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು.

ಪ್ರತಿಯೊಂದು ವಿಭಾಗಗಳಲ್ಲಿಯೂ ತಂತ್ರಜ್ಞಾನ ಬಳಕೆ ಅವಶ್ಯಕವಾಗಿದೆ. ಎಲ್ಲಾ ಕಚೇರಿಗಳಲ್ಲಿಯೂ ಕಂಪ್ಯೂಟರ್, ಲ್ಯಾಪ್ಟಾಪ್ ನೋಡುತ್ತಿರುತ್ತೇವೆ. ಇಂತಹ ಯುಗಕ್ಕೆ ತಂತ್ರಜ್ಞಾನದ ಅರಿವು ಮುಂಚೂಣಿಯಲ್ಲಿರಬೇಕು ಎಂದರು.

ಸಂಪನ್ಮೂಲ ವ್ಯಕ್ತಿ ಡಾ. ಆನಂದಕುಮಾರ್ ಸುಬ್ರಮಣಿ ನಾಥನ್ ಮಾತನಾಡಿ, ತಂತ್ರಜ್ಞಾನ ಕ್ಷೇತ್ರ ಕಿರಿದಾದುದಲ್ಲ. ಅದರಲ್ಲಿ ನೀವು ಕಲಿಯಬೇಕಾದ ಕ್ಷೇತ್ರವನ್ನು ಮೊದಲು ಆಯ್ಕೆ ಮಾಡಿಕೊಳ್ಳಿ. ಆಸಕ್ತಿ ಇಟ್ಟು ಕಲಿತರೆ ಯಾವುದೂ ಕಷ್ಟವಾಗುವುದಿಲ್ಲ. ಯಾವುದೇ ಕಲಿಕೆಯಾದರೂ ಜೀವನವನ್ನು ಉನ್ನತ ಮಟ್ಟಕ್ಕೆ ಕೊಂಡೊಯ್ಯುವ ಸಾಧನವೆಂಬುದನ್ನು ನೆನಪಿಟ್ಟುಕೊಳ್ಳಿ ಇಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಎಸ್.ಎಸ್.ಐ.ಟಿ ಕಾಲೇಜಿನ ಕಂಪ್ಯೂಟರ್ ವಿಭಾಗದ ಮುಖ್ಯಸ್ಥೆ ಡಾ. ರೇಣುಕಲತಾ ಎಸ್. ಮಾತನಾಡಿ, ವಿದ್ಯಾರ್ಥಿಗಳಿಗೆ ಪಠ್ಯಕ್ಕಿಂತ ಪಠ್ಯೇತರ ಜ್ಞಾನ ಅವಶ್ಯಕ. ಈ ನಿಟ್ಟಿನಲ್ಲಿ ಶಿಕ್ಷಣ ಸಂಸ್ಥೆಗಳು ವಿದ್ಯಾರ್ಥಿಗಳಿಗೆ ಜ್ಞಾನವನ್ನು ಒದಗಿಸಿಕೊಡುವ ಕಾರ್ಯನಿರ್ವಹಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ತುಮಕೂರು ವಿಶ್ವವಿದ್ಯಾನಿಲಯದ ವಿಜ್ಞಾನ ಕಾಲೇಜಿನ ಪ್ರಾಂಶುಪಾಲರಾದ ಪ್ರೊ. ಪ್ರಕಾಶ್ ಎಂ. ಶೇಟ್., ಡಾ. ಬಿ.ಎಲ್. ಮುಕುಂದಪ್ಪ, ಡಾ. ಆಂಥೋನಿ ನಾಥ್ ಅಮರನಾಥನ್ ಹಾಗೂ ಡಾ. ರಮಣಿ ಆರ್. ಮತ್ತಿತರರು ಉಪಸ್ಥಿತರಿದ್ದರು.

### ಸಿದ್ಧಗಂಗಾ ಮಠದಲ್ಲಿ ಮುಸ್ಲಿಂ ಮುಖಂಡರಿಂದ ರಂಜಾನ್ ಉಪವಾಸ ಸತ್ಕಾರ ಕೂಟ

## ಎಲ್ಲಾ ಧರ್ಮಗಳ ಸಾರ 'ಶಾಂತಿ–ಪ್ರೀತಿ': ಶ್ರೀ ಸಿದ್ಧಲಿಂಗ ಸ್ವಾಮೀಜಿ



ತುಮಕೂರು: ಪವಿತ್ರ ರಂಜಾನ್ ಪ್ರಯುಕ್ತ ವಿವಿಧ ಮುಸ್ಲೀಂ ಮುಖಂಡರು ಭಾನುವಾರ ಸಂಜೆ ಸಿದ್ಧಗಂಗಾ ಮಠಕ್ಕೆ ಭೇಟಿ ನೀಡಿ ಶ್ರೀ ಸಿದ್ಧಲಿಂಗ ಸ್ವಾಮೀಜಿಗಳ ಆಶೀರ್ವಾದ ಪಡೆದರು. ಅನ್ನ ದಾಸೋಹ ಕೇಂದ್ರ ಸಿದ್ಧಗಂಗಾ ಮಠದಲ್ಲಿ ಮುಖಂಡರು ರಂಜಾನ್ ಪ್ರಯುಕ್ತ ಕೈಗೊಂಡಿದ್ದ ಉಪವಾಸವನ್ನು ಅಂತ್ಯಗೊಳಿಸಿದರು. ಅಲ್ಲದೆ ಶ್ರೀಮಠದಲ್ಲಿ ನಡೆದ ಭಾವೈಕ್ಯತಾ ಸತ್ಕಾರ ಕೂಟದಲ್ಲಿ ಭಾಗವಹಿಸಿ ಫಲಾಹಾರ ಸೇವಿಸಿದರು.

ಈ ವೇಳೆ ಮಾತನಾಡಿದ ಸಿದ್ಧಲಿಂಗ ಸ್ವಾಮೀಜಿ, ಭಾರತ ಎಲ್ಲಾ ಧರ್ಮಗಳಿಗೂ ಆಶ್ರಯ ನೀಡಿದೆ. ಇನ್ಯಾವ ದೇಶಗಳಲ್ಲೂ ಭಾರತದಷ್ಟು ಧರ್ಮಗಳು ಇಲ್ಲ. ಎಲ್ಲಾ ಧರ್ಮಗಳ ಸಾರ ಒಂದೇ, ಅದು ಶಾಂತಿ ಮತ್ತು ಪ್ರೀತಿ. ಎಲ್ಲಾ ಧರ್ಮದವರು ಶಾಂತಿ, ಸಹಬಾಳ್ವೆಯಿಂದ ಬಾಳಬೇಕು ಎಂಬುದು ಎಲ್ಲಾ ಧರ್ಮಗಳ ಆಶಯ. ಭಾರತ ಭಾವೈಕ್ಯತೆಯ ದೇಶ ಎಂದು ಹೇಳಿದರು.

ಕೆಪಿಸಿಸಿ ಉಪಾಧ್ಯಕ್ಷ ಮುರಳಿಧರ ಹಾಲಪ್ಪ ಮಾತನಾಡಿದರು. ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ಮೆಹ್ರೂಜ್ ಖಾನ್, ಕೆಪಿಸಿಸಿ ಮಾಜಿ ಕಾರ್ಯದರ್ಶಿ ಇಕ್ಬಾಲ್ ಅಹ್ಮದ್, ಕೆಪಿಸಿಸಿ ಉಪಾಧ್ಯಕ್ಷ ಮುರಳಿಧರ ಹಾಲಪ್ಪ ಹಾಗೂ ಇತರೆ ಮುಖಂಡರು ಸಿದ್ಧಲಿಂಗ ಸ್ವಾಮೀಜಿಗಳ ಆಶೀರ್ವಾದ ಪಡೆದು ಸಂಜೆ ಮಠದಲ್ಲಿ ನಡೆದ ವಿದ್ಯಾರ್ಥಿಗಳ ಸಾಮೂಹಿಕ ಪ್ರಾರ್ಥನಾ ಸಭೆಯಲ್ಲಿ ಭಾಗವಹಿಸಿದ್ದರು.

ರಾಜೀವ್ ಗಾಂಧಿ ವೈದ್ಯಕೀಯ ವಿಶ್ವಿದ್ಯಾಲಯದ ಸೆನೆಟ್ ಸದಸ್ಯ ಡಾ.ಶ್ರೀನಿವಾಸನ್, ಕೆಪಿಸಿಸಿ ಕಾನೂನು ಘಟಕ ಕಾರ್ಯದರ್ಶಿ ಆಲಿ, ಮುಖಂಡ ರಾದ ಅನಿಲ್ ತಡಕಲ್, ಸೈಯದ್ ನಯಾಜ್ ಅಹ್ಮದ್, ಡಾ.ರಿಯಾನ್ ಷರೀಫ್ ಮೊದಲಾದವರಿದ್ದರು.

## ಕಾಳಿಕಾಂಬ ಪತ್ತಿನ ಸಹಕಾರ ಸಂಘಕ್ಕೆ ನೂತನ ಅಧ್ಯಕ್ಷ–ಉಪಾಧ್ಯಕ್ಷರ ಆಯ್ಕೆ



ತುಮಕೂರಿನ ಚಿಕ್ಕಪೇಟೆಯ ಶ್ರೀ ಕಾಳಿಕಾಂಬ ಪತ್ತಿನ ಸಹಕಾರ ಸಂಘದ ಕಾರ್ಯಕಾರಿ ಮಂಡಳಿಯ ಅಧ್ಯಕ್ಷ –ಉಪಾಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಕೆ.ವಿ.ಗೋವರ್ಧನಾಚಾರ್, ಉಪಾಧ್ಯಕ್ಷ ರಾಗಿ ಟಿ.ಪಿ.ವೇಣುಗೋಪಾಲ್ ಆಯ್ಕೆಯಾದರು. ಈ ವೇಳೆ ಜಿಲ್ಲಾ ವಿಶ್ವಕರ್ಮ ಸೇವಾ ಸಮಿತಿ ಅಧ್ಯಕ್ಷ ಹೆಬ್ಬೂರು ನಾಗರಾಜಚಾರ್, ಬ್ಯಾಂಕಿನ ನಿರ್ದೇಶಕರುಗಳಾದ ಟಿ.ಎ.ಸುಧೀರ್, ನಾಗರತ್ನ, ಈಶ್ವರಿ, ರಾಮಲಿಂಗಾಚಾರ್, ಗೋಪಾಲ ಕೃಷ್ಣಾಚಾರ್, ಟಿ.ಸಿ.ಡಮರುಗೇಶ್, ಎಸ್.ಹರೀಶ್, ಫೈರೋಜ್, ವ್ಯವಸ್ಥಾಪಕಿ ಜಿ. ಲೀಲಾ ಈ ವೇಳೆ ಉಪಸ್ಥಿತರಿದ್ದರು.

## ದ್ವಿತೀಯ ಪಿಯುಸಿ ಭೂಗೋಳಶಾಸ್ತ್ರ ಪರೀಕ್ಷೆ: 63 ವಿದ್ಯಾರ್ಥಿಗಳು ಗೈರುಹಾಜರಿ

ತುಮಕೂರು: ಜಿಲ್ಲೆಯಲ್ಲಿ ಇಂದು ನಡೆದ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ–1ರ ಭೂಗೋಳಶಾಸ್ತ್ರ ವಿಷಯದಲ್ಲಿ 63 ವಿದ್ಯಾರ್ಥಿಗಳು ಗೈರು ಹಾಜರಿದ್ದಾರೆ ಎಂದು ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ) ಉಪನಿರ್ದೇಶಕ ಬಾಲಗುರುಮೂರ್ತಿ ತಿಳಿಸಿದ್ದಾರೆ.

ಭೂಗೋಳಶಾಸ್ತ್ರ ವಿಷಯಕ್ಕೆ ಒಟ್ಟು 799 ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದು, ಈ ಪೈಕಿ 736 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದಾರೆ ಎಂದು ಅವರು ತಿಳಿಸಿದ್ದಾರೆ.

### ಪುನೀತ್ ರಾಜ್‌ಕುಮಾರ್ ಜನ್ಮದಿನ ಆಚರಣೆ ಸಂದರ್ಭದಲ್ಲಿ ಶಾಸಕ ಜಿ.ಬಿ.ಜೋತಿಗಣೇಶ್ ಅಭಿಪ್ರಾಯ

## ಸತ್ತ ನಂತರವೂ ಬದುಕಬಹುದು ಎಂಬುದಕ್ಕೆ 'ಅಪ್ಪು' ಜೀವನವೇ ಸಾಕ್ಷಿ



ತುಮಕೂರು: ಮನುಷ್ಯನ ಸಾಧನೆ, ಆತನ ಸಮಾಜ ಸೇವೆಗಳು ಆತ ಸತ್ತ ಮೇಲೆ ಜನ ಕೊಂಡಾಡುವಂತಿರಬೇಕು. ಇದಕ್ಕೆ ತಾಜಾ ಉದಾಹರಣೆ ಎಂದರೆ ಚಲನಚಿತ್ರ ನಟರು, ಸಮಾಜ ಸೇವಕರು ಆದ ಡಾ.ಪುನಿತ್ ರಾಜ್‌ಕುಮಾರ್ ಎಂದು ಶಾಸಕ ಜಿ.ಬಿ. ಜ್ಯೋತಿಗಣೇಶ್ ಅಭಿಪ್ರಾಯಪಟ್ಟಿದ್ದಾರೆ.


ನಗರದ ಎಸ್.ಎಸ್.ಪುರಂನ 6ನೇ ಕ್ರಾಸ್ ನಲ್ಲಿರುವ ಮಯೂರು ಯುವ ವೇದಿಕೆ ವತಿಯಿಂದ ಆಯೋಜಿಸಿದ್ದ ಡಾ.ಪುನಿತ್‌ರಾಜಕುಮಾರ್ ಅವರ 50ನೇ ಹುಟ್ಟು ಹಬ್ಬ ಕಾರ್ಯಕ್ರಮದಲ್ಲಿ ಪಾಲ್ಗೊಂಡು,ಪುನಿತ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿ ಮಾತನಾಡಿದ ಅವರು, ಬಲಗೈನಿಂದ ಕೊಟ್ಟ ದಾನ ಎಡಗೈಗೆ ಗೊತ್ತಾಗಬಾರದು ಎಂಬ ಗಾಧೆ ಇದೆ.ಇದಕ್ಕೆ ಅನ್ವಯಿಸುವಂತೆ ಪುನಿತ್‌ರಾಜ್ ಕುಮಾರ್ ಬದುಕಿದ್ದರು.ಅವರು ಸಾಯುವವರೆಗೂ ಮಾಡಿದ ಧಾನ,ಧರ್ಮಗಳ ಬಗ್ಗೆ ಎಲ್ಲಿಯೂ ಹೇಳಿಕೊಂಡಿರಲಿಲ್ಲ.ಇಡೀ ಯುವ ಸಮೂಹಕ್ಕೆ ಮಾದರಿಯಾಗಿದ್ದಾರೆ.ಅವರ ಹಳೆಯ ಸಿನಿಮಾಗಳ ರೀ ರಿಲೀಸ್‌ನ್ನು ಲಕ್ಷಾಂತರ ಜನರು ವೀಕ್ಷಿಸುತ್ತಿರುವುದೇ ಅವರ ಜನಪ್ರಿಯತೆಗೆ ನಿರ್ದೇಶನ ಎಂದರು.

ಓರ್ವ ಕಲಾವಿದರಾಗಿ, ಸಮಾಜ ಸೇವಕರಾಗಿ ಪುನಿತ್‌ರಾಜ್ ಕುಮಾರ್ ಸಮಾಜದಲ್ಲಿ ಹೇಗೆ ಬದುಕಬೇಕು ಎಂಬುದನ್ನು ತೋರಿಸಿಕೊಟ್ಟು ಹೋಗಿದ್ದಾರೆ.ಕಲೆಯಲ್ಲಿಯೂ ಸಹ ಬಾಲನಟನಾಗಿ ಪ್ರವೇಶ ಮಾಡಿ,ಒಳ್ಳೆಯ ಸಾಮಾಜಿಕ ಸಂದೇಶ ಗಳಿರುವ ಸಿನಿಮಾ ಮಾಡಿ,ತಂದೆಯನ್ನು ಮೀರಿ ಬೆಳೆದರು.ಮನೆಮಂದಿಯೆಲ್ಲಾ ಕುಳಿತು ನೋಡುವಂತಹ ಸಾಂಸಾರಿಕ ಚಿತ್ರಗಳನ್ನು ಮಾಡಿದ್ದರು.ಪ್ರತಿ ಸಿನಿಮಾದಲ್ಲಿಯೂ ಹೊಸತನವನ್ನು ಕಾಣಬಹುದಾಗಿತ್ತು.ಅವರ ಸಾಮಾಜಿಕ ಸೇವೆಯನ್ನು ಅವರ ಕುಟುಂಬ ಮುಂದುವರೆಸಿಕೊಂಡು ಹೋಗುವ ಮೂಲಕ ಅವರನ್ನು ಮತ್ತಷ್ಟು ಜೀವಂತವಾಗಿಡಲು ಪ್ರಯತ್ನಿಸುತ್ತಿದೆ. ಕರ್ನಾಟಕದಲ್ಲಿಯೇ ಅಲ್ಲದೆ ವಿಶ್ವದಲ್ಲಿಯೇ ಪುನಿತ್ ರಾಜ್‌ಕುಮಾರ್ ಫ್ಯಾನ್‌ಗಳಿದ್ದಾರೆ.ಇಂತಹ ಸಾರ್ಥಕ ಬದುಕು ಬದುಕಿದ ಡಾ.ಪುನಿತ್ ರಾಜ್‌ಕುಮಾರ್ ಅವರ ಆತ್ಮಕ್ಕೆ ಶಾಂತಿ ಸಿಗಲಿ, ಕುಟುಂಬದ ಆತ್ಮಸ್ಥೈರ್ಯ ಮತ್ತಷ್ಟ ಹೆಚ್ಚಲಿ ಎಂಬ ಆಶಯವನ್ನು ಶಾಸಕ ಜಿ.ಜಿ.ಜೋತಿಗಣೇಶ್ ವ್ಯಕ್ತಪಡಿಸಿದರು.

ಮಯೂರ ಯುವ ವೇದಿಕೆಯ ಅಧ್ಯಕ್ಷ ಪಿ.ಸದಾಶಿವಯ್ಯ ಮಾತನಾಡಿ, ಕನ್ನಡಿಗರ ಹೃದಯದಲ್ಲಿ ಸದಾ ನೆಲೆಸಿರುವ ಡಾ.ಪುನಿತ್ ರಾಜಕುಮಾರ್ ಅವರ 50ನೇ ಹುಟ್ಟು ಹಬ್ಬವನ್ನು ನಮ್ಮ ಮಯೂರು ಯುವ ವೇದಿಕೆಯಿಂದ ಆಚರಿಸ ಲಾಗುತ್ತಿದೆ.ಇವರು ಕಲಾವಿದರಾಗಿಯೇ ಅಲ್ಲ,ಸಾಮಾಜ ಸೇವಕರಾಗಿಯೂ ಹಲವಾರು ಜನರ ಬಾಳಿಗೆ ಬೆಳಕಾಗಿದ್ದಾರೆ.ಅವರ ಕಲಾ ಸೇವೆ ಮತ್ತು ಸಮಾಜ ಸೇವೆ ಇತರರಿಗೆ ಮಾದರಿಯಾಗಲಿ, ಕುಟುಂಬದವರು ಅವರ ಸಮಾಜಮುಖಿ ಕೆಲಸಗಳನ್ನು ಮುಂದುವರೆಸಲು ಭಗವಂತ ಶಕ್ತಿ ನೀಡಲಿ ಎಂದರು.

ಮಯೂರ ಯುವ ವೇದಿಕೆಯ ಪ್ರಧಾನ ಕಾರ್ಯದರ್ಶಿ ಎನ್.ಆರ್.ಸ್ವಾಮಿ ಮಾತನಾಡಿ,ನಮ್ಮ ವೇದಿಕೆ ಆರಂಭದಿಂದಲೂ ಡಾ.ರಾಜಕುಮಾರ್, ಪುನಿತ್ ರಾಜಕುಮಾರ್ ಅವರ ಹುಟ್ಟು ಹಬ್ಬ, ಪುಣ್ಯಸ್ಮರಣೆ ಕಾರ್ಯಕ್ರಮಗಳ ಜೊತೆಗೆ, ಅವರ ಚಲನಚಿತ್ರಗಳು ವಿಜಯೋತ್ಸವಗಳನ್ನು ಆಚರಿಸಿಕೊಂಡು ಬರಲಾಗುತ್ತಿದೆ. ಇಂದು ಡಾ.ಪುನಿತ್‌ರಾಜಕುಮಾರ್ ಅವರ 50ನೇ ಹುಟ್ಟು ಹಬ್ಬದ ಅಂಗವಾಗಿ ಹಿರಿಯ ನಾಗರಿಕರಿಗೆ ಆರೋಗ್ಯ ತಪಾಸಣೆ, ಇನ್ನಿತರ ಸೇವೆಗಳನ್ನು ಒದಗಿಸಲಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಕೇಕ್ ಕತ್ತರಿಸಿ, ಬಂದ ಜನರಿಗೆ ಅನ್ನ ಸಂತರ್ಪಣೆ ಏರ್ಪಡಿಸಲಾಗಿತ್ತು. ಕಸ್ತೂರ ಬಾ ಆಸ್ಪತ್ರೆಯ ಸಹಯೋಗದಲ್ಲಿ ಹಿರಿಯ ನಾಗರಿಕರಿಗೆ ಉಚಿತವಾಗಿ ಬಿ.ಪಿ, ಶುಗರ್ ತಪಾಸಣೆ ನಡೆಸಲಾಯಿತು.ಈ ವೇಳೆ ಮಯೂರು ಯುವ ವೇದಿಕೆ ಅಧ್ಯಕ್ಷ ಪಿ.ಸದಾಶಿವಯ್ಯ, ಕಾರ್ಯದರ್ಶಿ ಎನ್.ಆರ್. ಸ್ವಾಮಿ,ಸಿ.ಬಿ.ಜಗದೀಶ್, ರಾಜಕುಮಾರ್ ಗುಪ್ತ, ರವಿ ಜಂಗಾವಿ, ವಿನಯ್ ಜೈನ್, ಉಗಮ ಶ್ರೀನಿವಾಸ್, ಚಂದ್ರು, ದಾಸಣ್ಣ, ಮನೋಹರಬಾಬು, ದಿನೇಶಮೂರ್ತಿ ಸೇರಿದಂತೆ ಹಲವರು ಭಾಗವಹಿಸಿದ್ದರು.



ಮಧುಗಿರಿ ಪಟ್ಟಣದ ದಂಡಿನ ಮಾರಮ್ಮನ ಜಾತ್ರೆ ಪ್ರಯುಕ್ತ ನಡೆದ ಕುಂಚಿಟಿಗ ಒಕ್ಕಲಿಗ ಸಿಂಹ ವಾಹನ ರಥೋತ್ಸವಕ್ಕೆ ದೆಹಲಿ ವಿಶೇಷ ಪ್ರತಿನಿಧಿ ಶಾಸಕ ಟಿಬಿ ಜಯಚಂದ್ರ ಚಾಲನೆ ನೀಡಿದರು ಉಪವಿಭಾಗಾಧಿಕಾರಿ ಗೋಟೂರು ಶಿವಪ್ಪ ಕೆಪಿಸಿಸಿ ಉಪಾಧ್ಯಕ್ಷ ಮುರುಳಿಧರ ಹಾಲಪ್ಪ ಪುರಸಭಾ ಅಧ್ಯಕ್ಷರಾದ ಲಾಲಾ ಪೇಟೆ ಮಂಜುನಾಥ್ ಡಾ ಜಿ ಕೆ ಜಯರಾಮ್ ಎಂಜಿ ಶ್ರೀನಿವಾಸಮೂರ್ತಿ ಹಾಜರಿದ್ದರು

# ಪರಿಶಿಷ್ಟರ ಮೀಸಲು ಹಣ ಬಳಸಿದರೂ ಫುಲ್ ಫಿಲ್ ಮಾಡಲೇಬೇಕು: ಶಾಸಕ ಶ್ರೀನಿವಾಸ್

ಗುಬ್ಬಿ: ಎಸ್ಸಿಪಿ ಹಾಗೂ ಟಿಎಸ್ಪಿ ಮೀಸಲು ಹಣವನ್ನು ಬೇರೆ ಉದ್ದೇಶಕ್ಕೆ ಬಳಸುವಂತಿಲ್ಲ. ಅತ್ಯವಶ್ಯಕವಾಗಿ ಬಳಸಿದಲ್ಲಿ ವರ್ಷದಲ್ಲೇ ಫುಲ್ ಫಿಲ್ ಮಾಡಿ ಪರಿಶಿಷ್ಟರ ಶ್ರೇಯೋಭಿವೃದ್ಧಿಗೆ ಮಾತ್ರ ಬಳಸಬೇಕಿದೆ ಎಂದು ಶಾಸಕ ಎಸ್.ಆರ್.ಶ್ರೀನಿವಾಸ್ ದಲಿತರ ಹಣ ಬಳಕೆ ಬಗ್ಗೆ ಸಮರ್ಥಿಸಿಕೊಂಡರು.



ತಾಲ್ಲೂಕಿನ ಕಡಬ ಗ್ರಾಮ ಪಂಚಾಯಿತಿಯ ನೂತನ ಕಟ್ಟಡಕ್ಕೆ ಗುದ್ದಲಿಪೂಜೆ ನೆರವೇರಿಸಿ ಮಾತನಾಡಿದ ಅವರು 2013 ರಲ್ಲಿ ಸಿದ್ದರಾಮಯ್ಯ ಅವರೇ ಮೀಸಲು ಹಣ ಬಳಸದಂತೆ ಕಾನೂನು ಜಾರಿ ಮಾಡಿದ್ದರು. ತುರ್ತು ಬಳಸಿದರೂ ವರ್ಷದಲ್ಲಿ ಹಣ ಭರಿಸಬೇಕು. ಇಲ್ಲವಾದಲ್ಲಿ ಸಂಬಂಧಪಟ್ಟ ಅಧಿಕಾರಿಯನ್ನು ಹೊಣೆ ಮಾಡಿ ಪೊಲೀಸ್ ಕೇಸು ಕೂಡಾ ದಾಖಲು ಮಾಡಲಾಗುವುದು ಎಂದು ತಿಳಿಸಿದರು.

ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಸಾಂವಿಧಾನಾತ್ಮಕ ಹುದ್ದೆ ಅಲ್ಲ ಎಂಬ ವಿರೋಧ ಪಕ್ಷದ ಟೀಕೆಗೆ ಪ್ರತಿಕ್ರಿಯಿಸಿದ ಅವರು ಜನಾಂಗಕ್ಕೊಂದು ನಿಗಮ ರಚನೆ ಮಾಡಲಾಗಿತ್ತು. ನಿಗಮ ಮಂಡಳಿ ರಚಿಸಿ ಮೂಲ ವೆಚ್ಚಗಳನ್ನು ಸರ್ಕಾರವೇ ಭರಿಸಿವೆ. ಯಾವುದೂ ಸಂವಿಧಾನ ಪ್ರಕಾರವಿಲ್ಲ. ಆದರೂ ಆಯಾ ಸರ್ಕಾರ ನಿಗಮ, ಸಮಿತಿ ರಚಿಸಿ ನಡೆಸುವುದು ವಾಡಿಕೆಯಾಗಿದೆ ಎಂದು ಗ್ಯಾರಂಟಿ ಅನುಷ್ಠಾನ ಸಮಿತಿ ಬಗ್ಗೆ ಸಮರ್ಥಿಸಿಕೊಂಡು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಪ್ರತಿ ಸದನದ ಆರಂಭದಲ್ಲಿ ಔತಣ ಕೂಟ ನಡೆಸಿಕೊಂಡು ಬಂದಿದ್ದಾರೆ. ಹಾಗೆಯೇ ಈ ಬಾರಿಯೂ ಆಯೋಜನೆ ಮಾಡಿದ್ದು ವಿರೋಧ ಪಕ್ಷಕ್ಕೆ ಆಹಾರವಾಗಿದೆ ಅಷ್ಟೇ. ಪ್ರಜಾಪ್ರಭುತ್ವ ಅವರವರ ಹೇಳಿಕೆ ನೀಡಲು ಸ್ವತಂತ್ರರು ಎಂದು ಛೇಡಿಸಿದರು.

ಜಲ ಜೀವನ್ ಮಿಷನ್ ಯೋಜನೆ ಕಾಮಗಾರಿಗಳು ಕಳಪೆ ಬಗ್ಗೆ ದೂರು ಬಂದ ತಕ್ಷಣವೇ ಪಿಡಿಓಗಳ ಸಭೆ ಕರೆದು ಕಾಮಗಾರಿಯು ಪೂರ್ಣ ಗೊಂಡಿರುವ ಬಗ್ಗೆ, ಗುಣಮಟ್ಟದ ಬಗ್ಗೆ ಕೂಲಂಕಷ ಪರಿಶೀಲನೆ ಮಾಡಿ ಹಸ್ತಾಂತರ ಪಡೆಯಬೇಕು. ದೂರು ಇರುವ ಕೆಲಸವನ್ನು ಸರಿಪಡಿಸಿ ಪಂಚಾಯಿತಿಗೆ ನೀಡಬೇಕು. ಜೊತೆಗೆ ಒಂದು ವರ್ಷ ಕಳೆದರೂ ಕೆಲಸ ಆರಂಭಿಸಿದ ಗುತ್ತಿಗೆ ರದ್ದು ಮಾಡಿ ಮರು ಟೆಂಡರ್ ಮಾಡಲು ಸೂಚಿಸಲಾಗಿದೆ ಎಂದ ಅವರು ಸಿಸಿ ರಸ್ತೆಗಳ ಕಾಮಗಾರಿಗಳು ನಿರಂತರ ನಡೆಸಲಾಗಿದೆ. ಕುಡಿಯುವ ನೀರಿನ ಸಮಸ್ಯೆ ಎಲ್ಲೂ ಕಾಣದಂತೆ ಮುನ್ನೆಚ್ಚರಿಕೆ ಕ್ರಮ ವಹಿಸಲಾಗಿದೆ. ಟಾಸ್ಕ್ ಫೋರ್ಸ್ ಸಮಿತಿಯು ನೀರಿನ ತುರ್ತು ಅರಿತು ತೀವ್ರ ನಿಗಾವಹಿಸಿದೆ. ಸಹಾಯವಾಣಿ ಕೇಂದ್ರ ತೆರೆದಿದೆ. ಸಮಸ್ಯೆ ಕಂಡಲ್ಲಿ ತುರ್ತು ಕ್ರಮಕ್ಕೆ ಪಿಡಿಓಗಳಿಗೆ ಸೂಚಿಸಿದ್ದು, ನೀರಿಗೆ ಮೊದಲ ಆದ್ಯತೆ ನೀಡಲು ತಿಳಿಯಲಾಗಿದೆ ಎಂದರು.

ಈ ಸಂದರ್ಭದಲ್ಲಿ ಕಡಬ ಗ್ರಾಪಂ ಅಧ್ಯಕ್ಷೆ ಜಯಶ್ರೀ, ಉಪಾಧ್ಯಕ್ಷೆ ಕಲ್ಪನಾ, ಸದಸ್ಯರಾದ ಕಾಡಶೆಟ್ಟಿಹಳ್ಳಿ ಸತೀಶ್, ಸಿ.ಕೆ.ಗೌಡ, ವೆಂಕಟರಂಗಯ್ಯ, ಕವಿತಾ, ಪೂರ್ಣಲಕ್ಷ್ಮೀ, ಶಿಲ್ಪಾ, ಲೋಕೇಶ್, ಪೂರ್ಣಿಮಾ, ನಾಗರತ್ನಮ್ಮ, ಪುಟ್ಟತಾಯಮ್ಮ, ಭರತ್ ಗೌಡ, ಗಿರೀಶ್, ರಂಗನಾಥ್, ತಾಪಂ ಮಾಜಿ ಅಧ್ಯಕ್ಷ ಬಾಲಕೃಷ್ಣ, ಮುಖಂಡರಾದ ಧರ್ಮೇಗೌಡ, ರಾಜೇಶ್, ದರ್ಶನ್, ಉಮೇಶ್ ಇತರರು ಇದ್ದರು.

# ಆರ್ಯ ಈಡಿಗರ ಸಮಾಜದಿಂದ ಪುನಿತ್ ಹುಟ್ಟು ಹಬ್ಬ ಆಚರಣೆ



ತುಮಕೂರು: ನಗರದ ಆರ್ಯ ಈಡಿಗ ಸಮಾಜದವರು ಸೋಮವಾರ ನಗರದಲ್ಲಿ ನಟ ಡಾ.ಪುನಿತ್ ರಾಜ್ ಕುಮಾರ್ ಅವರ 50ನೇ ಹುಟ್ಟು ಹಬ್ಬವನ್ನು ಸಂಭ್ರಮದಿಂದ ಆಚರಿಸಿದರು.

ಕುಣಿಗಲ್ ರಸ್ತೆಯ ವಿಬಿಸ್ ಹೋಟೆಲ್ ಬಳಿ ಪುನಿತ್ ರಾಜ್ ಕುಮಾರ್ ಭಾವಚಿತ್ರಕ್ಕೆ ಪೂಜೆ ಮಾಡಿ ಪುಷ್ಪಾರ್ಚನೆ ಮಾಡಿ ಗೌರವ ಸಲ್ಲಿಸಿದರು. ಕೇಕ್ ಕತ್ತರಿಸಿ, ಸಿಹಿ ವಿತರಿಸಿದರು.

ಆರ್ಯ ಈಡಿಗ ಸಮಾಜದ ಮುಖಂಡ, ಉದ್ಯಮಿ ಎಂ.ಕೆ.ವೆಂಕಟ ಸ್ವಾಮಿ ಮಾತನಾಡಿ, ಪುನಿತ್ ರಾಜ್‌ಕುಮಾರ್ ಅವರು ನಟರಾಗಿ ಪ್ರಸಿದ್ಧರಾಗುವ ಜೊತೆಗೆ ಬಡವರು, ಅನಾಥರು, ಅಂಧರಿಗೆ ನೆರವಾಗುವಂತಹ ಸಮಾಜ ಸೇವಾ ಕಾರ್ಯ ಮಾಡಿ ಆದರ್ಶದ ವ್ಯಕ್ತಿಯಾಗಿ ನಾಡಿನಲ್ಲಿ ಹೆಸರಾಗಿದ್ದಾರೆ. ಇಂದಿನ ಯುವಜನರಿಗೆ ಪುನಿತ್ ಅವರ ಆದರ್ಶ ವ್ಯಕ್ತಿತ್ವ ಪ್ರೇರಣೆ ಆಗಬೇಕು ಎಂದು ಆಶಿಸಿದರು.

ಕನ್ನಡ ಸೇನೆ ಜಿಲ್ಲಾಧ್ಯಕ್ಷ ಧನಿಯಾ ಕುಮಾರ್ ಮಾತನಾಡಿ, ಮಾದರಿ ವ್ಯಕ್ತಿತ್ವದ ಮೂಲಕ ಹೆಸರಾದ ಪುನಿತ್ ರಾಜ್‌ಕುಮಾರ್ ಅವರು ಡಾ.ರಾಜ್ ಕುಮಾರ್ ಕುಟುಂಬದ ಪುತ್ರ, ಈ ನಾಡಿನ ಹೆಮ್ಮೆಯ ಪುತ್ರ ಆಗಿದ್ದಾರೆ. ಅವರು ಮಾಡಿದ ಸಮಾಜ ಸೇವಾ ಕಾರ್ಯ ಹಾಗೂ ಆದರ್ಶದ ನಡವಳಿಕೆಯಿಂದಾಗಿ ಪುನಿತ್ ಅವರು ಕೋಟ್ಯಾಂತರ ಅಭಿಮಾನಿ ಗಳ ಪ್ರೀತಿ ಗಳಿಸಿದ್ದಾರೆ ಎಂದರು.

ಜಿಲ್ಲಾ ಈಡಿಗ ಸಂಘದ ಖಜಾಂಚಿ ಹೆಚ್.ಎಂ.ಕುಮಾರ್, ರಾಜ್ಯ ಸಂಘದ ಸದಸ್ಯೆ ಕೆ.ಭಾಗ್ಯವತಿ, ಮುಖಂಡರಾದ ಎಂ.ವಿ.ತೇಜೇಶ್, ಎಂ.ವಿ.ಅರ್ಜುನ್, ಅನಿಲ್‌ಕುಮಾರ್, ಎಂ.ವಿ.ಲಕ್ಷ್ಮೀಶ್ ಮೊದಲಾದವರು ಭಾಗವಹಿಸಿದ್ದರು.

ಇದರ ಅಂಗವಾಗಿ ಸಾರ್ವಜನಿಕರಿಗೆ ಅನ್ನ ಸಂತರ್ಪಣೆ ಏರ್ಪಡಿಸಲಾಗಿತ್ತು.

# ಪುನಿತ್ ರಾಜ್‌ಕುಮಾರ್ ಬಡಾವಣೆಯಲ್ಲಿ ನಾಗರಿಕರಿಂದ ಪುನಿತ್ ಜನ್ಮ ದಿನಾಚರಣೆ



ತುಮಕೂರು: ನಗರದ ಕ್ಯಾತ್ಸಂದ್ರದ ಪುನಿತ್ ರಾಜ್‌ಕುಮಾರ್ ಬಡಾವಣೆಯಲ್ಲಿ ಇಲ್ಲಿನ ನಾಗರೀಕ ಹಿತ ರಕ್ಷಣಾ ಸಮಿತಿಯಿಂದ ಸೋಮವಾರ ನಟ ದಿ.ಡಾ.ಪುನಿತ್ ರಾಜ್‌ಕುಮಾರ್ ಅವರ 50ನೇ ಹುಟ್ಟು ಹಬ್ಬ ಆಚರಿಸಲಾಯಿತು.

ಮುಖಂಡರು ಪುನಿತ್ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪಾರ್ಚನೆ ಮಾಡಿ ಗೌರವ ನಮನ ಸಲ್ಲಿಸಿದರು. ನಾಗರೀಕ ಸಮಿತಿ ಅಧ್ಯಕ್ಷ ಪ್ರತಾಪ್ ಮದಕರಿ, ಸಮಿತಿ ಕಾರ್ಯದರ್ಶಿ ಸಂಪತ್‌ಕುಮಾರ್, ಸಹ ಕಾರ್ಯದರ್ಶಿ ಮಂಜುನಾಥ್, ಗುರುರಾಜ್ ಹಾಗೂ ನಾಗರೀಕ ಮುಖಂಡರು ಭಾಗವಹಿಸಿದ್ದರು. ಇದರ ಅಂಗವಾಗಿ ಸಾರ್ವಜನಿಕರಿಗೆ ಅನ್ನ ಸಂತರ್ಪಣೆ ಏರ್ಪಡಿಸಲಾಗಿತ್ತು.

# ಕುಣಿಗಲ್‌ನಲ್ಲಿ ಅಪ್ಪು ಜನ್ಮಜಯಂತಿ ಆಚರಣೆ



ಕುಣಿಗಲ್ : ಕರುನಾಡಿನ ಹೆಮ್ಮೆಯ ಅಪ್ಪು ರವರ 50ನೇ ಜನ್ಮ ಜಯಂತಿಯನ್ನು ಸಡಗರ ಸಂಭ್ರಮದಿಂದ ಬಿಜೆಪಿ ಯುವ ಮುಖಂಡ ಕೆ ಎನ್ ಜಗನ್ನಾಥ್ ನೇತೃತ್ವದಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಪಟ್ಟಣದ ಹುಚ್ಚಮಾಸ್ತಿಗೌಡ ವೃತ್ತದಲ್ಲಿ ಚಿತ್ರನಟ ಕರ್ನಾಟಕ ರತ್ನ ದಿವಂಗತ ಡಾ. ಪುನೀತ್ ರಾಜಕುಮಾರ್ ಅಭಿಮಾನಿಗಳು 50ನೇ ಜನ್ಮ ಜಯಂತಿಯನ್ನು ವಿವಿಧ ಸಂಘ ಸಂಸ್ಥೆಗಳ ಮುಖಂಡರು ಅಭಿಮಾನಿಗಳೊಂದಿಗೆ ಡಾಕ್ಟರ್ ಪುನೀತ್ ರಾಜಕುಮಾರ್ ರವರ ಭಾವಚಿತ್ರಕ್ಕೆ ಪುಷ್ಪ ನಮನಗಳನ್ನು ಸಲ್ಲಿಸಲಾಯಿತು. ಪುನೀತ್ ರಾಜಕುಮಾರ್ ರವರು ನಾಡಿನ ಯುವ ಸಮೂಹಕ್ಕೆ ಆದರ್ಶ ಮಾದರಿಯದಂತಹ ಚಿತ್ರನಟರಾಗಿ ತಮ್ಮ ಬದುಕಿನಲ್ಲೂ ಸಹ ಸಮಾಜದ ಸುಧಾರಣೆಗೆ ಹಲವಾರು ವಿನೂತನ ಕಾರ್ಯಕ್ರಮಗಳನ್ನ ಹಮ್ಮಿಕೊಂಡು ಬಡವರಿಗೆ ವಿದ್ಯಾರ್ಥಿಗಳಿಗೆ, ಅಂಗವಿಕಲರಿಗೆ ಚಿತ್ರ ಕಲಾವಿದರಿಗೆ ತನ್ನದೇ ಆದಂತಹ ಕೊಡುಗೆ ನೀಡಿದಂತಹ ಮಹಾ ವ್ಯಕ್ತಿಯಾಗಿದ್ದರು ಎಂದು ಕೆಎನ್ ಜಗನ್ನಾಥ್ ಸ್ಮರಿಸಿರು. ನೆರೆದಿದ್ದ ಸಾವಿರಾರು ಅಭಿಮಾನಿಗಳಿಗೆ ಚಿಕನ್ ಬಿರಿಯಾನಿ ಅನ್ನ ಸಂತರ್ಪಣೆ ಏರ್ಪಡಿಸಲಗಿತ್ತು ಹಾಗೂ ವಿಶೇಷವಾಗಿ ಶಾಲಾ ಮಕ್ಕಳಿಗೆ ನೋಟ್ ಪುಸ್ತಕ, ಲೇಖನ ಸಾಮಗ್ರಿಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಅಖಿಲ ಕರ್ನಾಟಕ ಡಾಕ್ಟರ್ ಪರಮೇಶ್ವರ್ ಯುವ ಸೇನೆ ರಾಜ್ಯಾಧ್ಯಕ್ಷ ನಗುತ ರಂಗನಾಥ್,ತಾಲೂಕು ಬಿಜೆಪಿ ಪ್ರಧಾನ ಕಾರ್ಯದರ್ಶಿ ದೇವರಾಜ್,ಅಂಬರೀಶ್ ಅಭಿಮಾನಿಗಳ ಸಂಘದ ಅಧ್ಯಕ್ಷ ವೆಂಕಟೇಶ್ ಬಾಬು, ಪತ್ರಕರ್ತರಾದ ರಾಮಚಂದ್ರಯ್ಯ ತಾಲೂಕು ದಂಡೂರ ಅಧ್ಯಕ್ಷ ನರಸಿಂಹಮೂರ್ತಿ,ವಿಶ್ವನಾಥ್, ಸೇರಿದಂತೆ ಅನೇಕರು ಭಾಗವಹಿಸಿದ್ದರು.

## ತುರುವೇಕೆರೆ ಕಾರ್ಯಕ್ರಮದಲ್ಲಿ ಅಸಹಾಯಕತೆ ವ್ಯಕ್ತಪಡಿಸಿದ ಕೇಂದ್ರ ಸಚಿವ ವಿ.ಸೋಮಣ್ಣ

# ‘ಎಕ್ಸ್‌ಪ್ರೆಸ್ ಕೆನಾಲ್ ವಿರುದ್ದದ ಹೋರಾಟಕ್ಕೆ ಬಂದರೆ ಗೂಟದ ಕಾರು ಕಿತ್ತುಕೊಳ್ತಾರೆ’

ತುರುವೇಕೆರೆ: ಹೇಮಾವತಿ ಎಕ್ಸ್‌ಪ್ರೆಸ್ ಕೆನಾಲ್ ವಿರುದ್ಧದ ಹೋರಾಟಕ್ಕೆ ನಾನು ಬಂದರೆ ನನ್ನ ಗೂಟದ ಕಾರು ಕಿತ್ತು ಹಾಕುತ್ತಾರೆ, ಆದ್ದರಿಂದ ನಾನು ಹೋರಾಟಕ್ಕೆ ಬರಲು ಸಾಧ್ಯವಿಲ್ಲ ಎಂದು ಜಿಲ್ಲೆಯ ಜನಪ್ರತಿನಿಧಿಗಳಿಗೆ ಹೇಳಿದ್ದೀನಿ ಎಂದು ತುಮಕೂರು ಜಿಲ್ಲಾ ಸಂಸದ, ಕೇಂದ್ರ ಜಲಶಕ್ತಿ ಮತ್ತು ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಅಸಹಾಯಕತೆ ವ್ಯಕ್ತಪಡಿಸಿದರು.

ಪಟ್ಟಣದ ಕೆ.ಹಿರಣ್ಣಯ್ಯ ಬಯಲು ರಂಗಮಂದಿರದಲ್ಲಿ ತಾಲೂಕು ಆಡಳಿತದಿಂದ ಆಯೋಜಿಸಿದ್ದ ಕೇಂದ್ರ ಸರ್ಕಾದರ ವಿಶೇಷ ಅಡಿಪ್ ಯೋಜನೆಯಡಿ ದಿವ್ಯಾಂಗರಿಗೆ ಉಚಿತ ಸಾಧನ ಸಲಕರಣೆಗಳ ವಿತರಿಸಿ ಮಾತನಾಡಿದ ಅವರು, ಜಿಲ್ಲೆಯ ಜನರ ಆಶೀರ್ವಾದದಿಂದ ಸಂಸದನಾಗಿದ್ದೇನೆ.



ತುಮಕೂರು ಜಿಲ್ಲೆಯ ಪಾಲಿಗೆ ಮರಣಶಾಸನವಾಗಿರುವ ಹೇಮಾವತಿ ಎಕ್ಸ್‌ಪ್ರೆಸ್ ಚಾನಲ್ ವಿರುದ್ಧದ ಹೋರಾಟದಲ್ಲಿ ಜಿಲ್ಲೆಯ ಸಂಸದರಾಗಿ, ಕೇಂದ್ರ ಸಚಿವರಾಗಿ ನೀವು ನಮ್ಮೊಂದಿಗೆ ಹೋರಾಟದಲ್ಲಿ ಪಾಲ್ಗೊಳ್ಳಬೇಕೆಂದು ಜಿಲ್ಲೆಯ ಜನಪ್ರತಿನಿಧಿಗಳು, ಶಾಸಕ ಎಂ.ಟಿ.ಕೃಷ್ಣಪ್ಪ, ಮಾಜಿ ಶಾಸಕ ಮಸಾಲಾ ಜಯರಾಮ್ ಎಲ್ಲರೂ ಒತ್ತಡ ಹೇರಿದ್ದಾರೆ. ಆದರೆ ನಾನು ಹೋರಾಟದಲ್ಲಿ ಪಾಲ್ಗೊಂಡರೆ ನನ್ನ ಗೂಟದ ಕಾರನ್ನು ಕಿತ್ತುಕೊಳ್ಳುತ್ತಾರೆ, ಆದ್ದರಿಂದ ಕೇಂದ್ರ ಸಚಿವನಾಗಿ ನಾನು ಹೋರಾಟದಲ್ಲಿ ಪಾಲ್ಗೊಳ್ಳಲು ಸಾಧ್ಯವಿಲ್ಲ ಎಂದಿದ್ದೇನೆ ಎಂದರು.

ಕ್ಷೇತ್ರದ ತುರುವೇಕೆರೆ ಕೆರೆ ಅಭಿವೃದ್ದಿಗೆ ಕೇಂದ್ರ ಜಲಯೋಜನಾ ಸಚಿವರೊಂದಿಗೆ ಚರ್ಚಿಸಿ 50ಕೋಟಿ ಅನುದಾನ ಒದಗಿಸಿಕೊಡುವ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಶಾಸಕ ಎಂ.ಟಿ.ಕೃಷ್ಣಪ್ಪ, ಮಾಜಿ ಶಾಸಕ ಎಂ.ಡಿ. ಲಕ್ಷ್ಮೀನಾರಾಯಣ್, ತಿಪಟೂರು ಉಪವಿಭಾಗಾಧಿಕಾರಿ ಸಪ್ತಶ್ರೀ, ತಹಸೀಲ್ದಾರ್ ಕುಂಞ ಅಹಮದ್, ಇಒ ಶಿವರಾಜಯ್ಯ, ಬಿಇಒ ಸೋಮಶೇಖರ್, ಪಪಂ ಅಧ್ಯಕ್ಷೆ ಸ್ವಪ್ನ ನಟೇಶ್, ಉಪಾಧ್ಯಕ್ಷೆ ಭಾಗ್ಯ, ಸದಸ್ಯರಾದ ಆಶಾ, ಚಿದಾನಂದ್, ಅಂಜನ್ ಕುಮಾರ್, ಶೀಲಾ ಮುಂತಾದವರಿದ್ದರು.

## ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ 36 ಸ್ಥಾನ: ಎಂ.ಟಿ.ಕೃಷ್ಣಪ್ಪ



ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಬರೀ 36 ಸ್ಥಾನ ಸಿಗಲಿದೆ ಎಂದು ಶಾಸಕ ಎಂ.ಟಿ.ಕೃಷ್ಣಪ್ಪ ಭವಿಷ್ಯ ನುಡಿದರು.

2023ರ ವಿಧಾನಸಭಾ ಚುನಾವಣೆಯಲ್ಲಿ ರಾಜ್ಯದ ಜನತೆ ಕಾಂಗ್ರೆಸ್ ಪಕ್ಷ ಘೋಷಿಸಿದ್ದ ಗ್ಯಾರಂಟಿ ಯೋಜನೆಗಳಿಗೆ ಮಾರುಹೋಗಿ ಕಾಂಗ್ರೆಸ್‌ಗೆ ಮತ ನೀಡಿ 136 ಸ್ಥಾನದಲ್ಲಿ ಗೆಲ್ಲಿಸಿ ಅಧಿಕಾರಕ್ಕೆ ತಂದರು. ಆದರೆ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕೆ ಅನುದಾನ ಹೊಂದಿಸುವಲ್ಲಿ ಸಾಧ್ಯವಾಗದೆ ಜನಸಾಮಾನ್ಯರಿಂದ ಹೆಚ್ಚಿನ ತೆರಿಗೆ ವಸೂಲಿ ಮಾಡುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಟ್ಯಾಕ್ಸ್‌ರಾಮಯ್ಯ ಎಂದು ಕರೆದರೂ ಯಾವುದೇ ತಪ್ಪಿಲ್ಲ ಎಂದರು.

# ಕನಕವೃತ್ತ–ದಿಬ್ಬೂರು ವೃತ್ತ ರಸ್ತೆ ಅಭಿವೃದ್ಧಿ

ತುಮಕೂರು: ಪಾಲಿಕೆ ವತಿಯಿಂದ ನಗರದ ಶಿರಾಗೇಟ್(ಕನಕವೃತ್ತ) ವೃತ್ತದಿಂದ ದಿಬ್ಬೂರು ವೃತ್ತದವರೆಗೆ ಸಂಪರ್ಕ ಕೂಡುವ ಐಡಿಎಸ್‌ಎಂಟಿ 80 ಅಡಿ ರಸ್ತೆಯ ಅಭಿವೃದ್ಧಿ ಕಾಮಗಾರಿಯನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದ್ದು, ಸಾರ್ವಜನಿಕರು ಸಹಕರಸಬೇಕೆಂದು ಪಾಲಿಕೆ ಆಯುಕ್ತ ಬಿ.ಅಶ್ವಿಜ ಮನವಿ ಮಾಡಿದ್ದಾರೆ. ಕಳೆದ ವರ್ಷ ನಗರದ ಎಸ್.ಮಾಲ್ ಬಳಿ ಸೇತುವೆ ನಿರ್ಮಾಣ ಸಂದರ್ಭದಲ್ಲಿ ಭಾರಿ ವಾಹನಗಳ ದಟ್ಟಣೆಯಿಂದ ಶಿರಾಗೇಟ್ (ಕನಕವೃತ್ತ) ವೃತ್ತದಿಂದ ದಿಬ್ಬೂರು ವೃತ್ತದವರೆಗೆ ಸಂಪರ್ಕ ಕೂಡುವ ಐಡಿಎಸ್‌ಎಂಟಿ 80 ಅಡಿ ರಸ್ತೆಯು ತುಂಬಾ ಹಾಳಾಗಿರುವ ಹಿನ್ನೆಲೆಯಲ್ಲಿ ರಸ್ತೆ ಅಭಿವೃದ್ಧಿಪಡಿಸುವ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುತ್ತಿದೆ.

ಈ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ಮಹಾತ್ಮಗಾಂಧಿ ನಗರ ವಿಕಾಸ ಯೋಜನೆ–2ರ ಕ್ರಿಯಾ ಯೋಜನೆಯಡಿ ಅಭಿವೃದ್ಧಿಪಡಿಸಲು 14 ಕೋಟಿ ರೂ.ಗಳ ಅನುದಾನ ಮಂಜೂರಾ ಗಿದ್ದು, ಮಣ್ಣಿನ ಗುಣಮಟ್ಟವನ್ನು ಪರೀಕ್ಷಿಸಲು ಮಣ್ಣಿನ ಮಾದರಿಯನ್ನು ಸಂಗ್ರಹಿಸಿ ಮೂರನೇ ವ್ಯಕ್ತಿ ಪರೀಕ್ಷೆಗಾಗಿ ನೀಡಲಾಗಿದೆ.

ಸಂಚಾರ ಸುವ್ಯವಸ್ಥೆಗಾಗಿ ಶಿರಾಗೇಟ್(ಕನಕವೃತ್ತ) ವೃತ್ತದಿಂದ ದಿಬ್ಬೂರು ವೃತ್ತದವರೆಗೆ ಸಂಪರ್ಕ ಕೂಡುವ ಈ ರಸ್ತೆಯಲ್ಲಿ ಲಘು ವಾಹನಗಳಿಗೆ ಮಾತ್ರ ಸಂಚರಿಸಲು ಅವಕಾಶ ನೀಡುವ ಹಾಗೂ ಭಾರಿ ವಾಹನಗಳ ಸಂಚಾರವನ್ನು ತಡೆಗಟ್ಟುವ ಸಲುವಾಗಿ ಬ್ಯಾರಿಕೇಡ್‌ಗಳನ್ನು ಅಳವಡಿಸಲಾಗುವುದು. ಬ್ಯಾರಿಕೇಡ್‌ಗಳನ್ನು ಶಿರಾಗೇಟ್ ವೃತ್ತದ ಎರಡು ರಸ್ತೆ ಹಾಗೂ ಶನಿಮಹಾತ್ಮ ಸ್ವಾಮಿ ದೇವಸ್ಥಾನದ ಎದುರು ಅಳವಡಿಸಲಾಗುವುದು ಎಂದು ಅವರು ತಿಳಿಸಿದ್ದಾರೆ.

# ವಿದ್ಯುತ್ ವ್ಯತ್ಯಯ

ತುಮಕೂರು: ಬೆಸ್ಕಾಂ ನಗರ ಉಪ ವಿಭಾಗ–1ರ ವ್ಯಾಪ್ತಿಯಲ್ಲಿ ದುರಸ್ತಿ ಕಾಮಗಾರಿ ಕೈಗೊಂಡಿರುವುದರಿಂದ ಮಾರ್ಚ್ 18 ರಿಂದ 26ರವರೆಗೆ ಬೆಳಿಗ್ಗೆ 10 ರಿಂದ ಸಂಜೆ 6 ಗಂಟೆಯವರೆಗೆ ಗೋವಿಂದನಗರ, ಹೌಸಿಂಗ್‌ಬೋರ್ಡ್, ಗುಬ್ಬಿಗೇಟ್, ಕುಂಟಮ್ಮನ ತೋಟ, ದಿಬ್ಬೂರು, ಬಿ.ಎಚ್. ಪಾಳ್ಯ, ಹೊನ್ನೇನಹಳ್ಳಿ ರಸ್ತೆ, ಹಾರೋನಹಳ್ಳಿಯಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗ ಲಿದ್ದು, ಸಹಕರಿಸಬೇಕೆಂದು ಕೋರಲಾಗಿದೆ

# ತಾಲ್ಲೂಕು ವೈದ್ಯಾಧಿಕಾರಿ ವಿರುದ್ಧ ಪಾವಗಡದಲ್ಲಿ ಬಿಜೆಪಿ ಪ್ರತಿಭಟನೆ

ಪಾವಗಡ: ಪಟ್ಟಣದ ಸಾರ್ವಜನಿಕ ಅಸ್ಪತ್ರೆಯಲ್ಲಿ ವೈದ್ಯರನ್ನು ನೇಮಿಸುವುದು ಸೇರಿದಂತೆ ವಿವಿಧ ಸಮಸ್ಯೆಗಳನ್ನು ಬಗೆಹರಿಸುವಂತೆ ಒತ್ತಾಯಿಸಿ ತಾಲ್ಲೂಕು ಬಿ.ಜೆ.ಪಿ. ಪಕ್ಷದ ವತಿಯಿಂದ ಸೋಮವಾರ ತಹಶೀಲ್ದಾರ್ ಕಛೇರಿಗೆ ಮುತ್ತಿಗೆ ಹಾಕಿ ತಹಶೀಲ್ದಾರ್ ಡಿ.ಎನ್. ವರದರಾಜುಗೆ ಮನವಿ ಪತ್ರ ಸಲ್ಲಿಸಲಾಯಿತು.



ತಾಲ್ಲೂಕು ಬಿ.ಜೆ.ಪಿ. ಪಕ್ಷದ ಅಧ್ಯಕ್ಷ ರಾದ ದೊಡ್ಡಹಳ್ಳಿ ಅಶೋಕ್ ಮಾತ ನಾಡಿ, ತಾಲ್ಲೂಕು ವೈದ್ಯರಾದ ಕಿರಣ್ ಕುಮಾರ್ ರವರು ತಮ್ಮ ಹುದ್ದೆಗೆ ರಾಜೀನಾಮೆ ನೀಡಿ ರಾಜಕೀಯ ಮಾಡಲಿ, ತಾಲ್ಲೂಕಿನಲ್ಲಿ ಕಾಂಗ್ರೆಸ್ ಪ್ರೇರಿತ ಅಧಿಕಾರಿಗಳಿದ್ದು ಅವರನ್ನು ರೆಡ್ ಬುಕ್‌ನಲ್ಲಿ ನಮೂದಿಸಲಾಗುವುದು, ಮುಂದಿನ ದಿನಗಳಲ್ಲಿ ಅವರನ್ನು ತಾಲ್ಲೂಕು ಬಿಟ್ಟು ಓಡಿಸಲಾಗುತ್ತದೆ, ನಮ್ಮ ಬಿ.ಜೆ.ಪಿ. ಅಧಿಕಾರವದಿಯಲ್ಲಿ 13 ಕೋಟಿ ವೆಚ್ಚದಲ್ಲಿ ಸರ್ಕಾರಿ ಅಸ್ಪತ್ರೆಯನ್ನು ನಿರ್ಮಾಣ ಮಾಡಿದ್ದರೆ,ಇಲ್ಲಿಯವರೆಗೂ ವೈದ್ಯರನ್ನು , ಕನಿಷ್ಟ ಪಕ್ಷ ನರ್ಸಗಳನ್ನು ನೇಮಕ ಮಾಡಿಲ್ಲಾ, ಅಂಬುಲೆನಸ್ ಗಳಿಗೆ ಡೀಸಲ್ ಹಾಕಿಸಲು ಹಣ ಇಲ್ಲಾ ಎನ್ನುತ್ತಾರೆ, ರಾಜ್ಯ ಸರ್ಕಾರ 13 ಸಾವಿರ ಕೋಟಿ ಎಸ್.ಸಿ. ಎಸ್.ಟಿ. ಹಣವನ್ನು ದುರ್ಬಳಕ್ಕೆ ಮಾಡಿದ್ದು, ಈ ಕೂಡಲೆ ಶಾಸಕರು ಕ್ರಮ ಜರುಗಿಸಿ ಅಸ್ಪತ್ರೆಗೆ ವೈದ್ಯರನ್ನು ನೇಮಿಸುವವರೆಗೂ ನಮ್ಮ ಹೋರಾಟ ಮುಂದುವರೆಯುತ್ತದೆ ಎಂದು ಎಚ್ಚರಿಸಿದರು.

ಮುಖಂಡ ಬಿ.ಜೆ.ಪಿ. ರವಿ ಮಾತನಾಡಿ, ಸರ್ಕಾರಿ ಅಸ್ಪತ್ರೆಯಲ್ಲಿ ವೈದ್ಯರಿಲ್ಲದೆ ಸಮಸ್ಯೆ ಇದ್ದರೂ ಸಹ ಶಾಸಕರು, ತಹಶೀಲ್ದಾರ್, ತಾಲ್ಲುಕು ಅಡಳಿತ ಸುಮ್ಮನಿದ್ದು ಸರ್ಕಾರಿ ಅಸ್ಪತ್ರೆಯನ್ನು ಮುಚ್ಚವುದು ಲೇಸು ಎಂದು ಲೇವಡಿ ಮಾಡಿದರು.

ಇದೇ ವೇಳೆ ಶ್ರೀರಂಗಪುರ ತಾಂಡಾದ ಗಣೇಶ್ ನಾಯ್ಕ ಎಂಬ ಬಾಧಿತ ಮಾತನಾಡಿ , ಕಳೆದ ತಿಂಗಳು ಪಾವಗಡ ಸರ್ಕಾರಿ ಅಸ್ಪತ್ರೆಗೆ ಚಿಕಿತ್ಸೆ ಹೋಗಿದ್ದಾಗ ವೈದ್ಯರಿಲ್ಲದೆ ತುಮಕೂರು, ಬೆಂಗಳೂರಿಗೆ ಹೋಗುವಾಗ ಮಾರ್ಗ ಮದ್ಯ ನನ್ನ ತಂದೆ ಸಾವನ್ನಪ್ಪಿದ್ದು, ಇಂತಹ ಅನ್ಯಾಯ ಯಾರಿಗೂ ಆಗಬಾರದು ಕೂಡಲೆ ವೈದ್ಯರನ್ನು ನೇಮಿಸಿ ಎಂದು ಅಲವತ್ತು ಕೊಂಡರು.

ಮುಖಂಡ ಡಾ. ಜಿ. ವೆಂಕಟ ರಾಮಯ್ಯ , ಶ್ರೀರಾಂಗುಪ್ತಾ ಮತ್ತಿತರು ಮಾತನಾಡಿದರು. ಈ ವೇಳೆ ಮುಖಂಡ ಶಿವಕುಮಾರ್ ಸಾಕೇಲ್, ಮಾಧವ ರೆಡ್ಡಿ, ಸುಮನ್, ನಾರಾಯಣಪ್ಪ, ದೊಮ್ಮತ ಮರಿ ಕೃಷ್ಣಪ್ಪ, ಗೋಲ್ಡನ್ ಮಂಜು, ಹನುಮಂತರೆಡ್ಡಿ, ಪ್ರಸನ್ನಕುಮಾರ್, ಹರೀಶ್, ಮುರಳಿ, ಪೂಜಾರಿ ರಾಮಣ್ಣ, ಬಳಸಮುದ್ರ ನಾರಾಯಣಪ್ಪ, ಬಿ.ಜೆ.ಪಿ. ನಾರಾಯಣಪ್ಪ, ವೈ.ಎನ್.ಎಚ್. ಮುರಳಿ, ಬಾಲರಾಜ್, ಮಹಾಲಿಂಗಪ್ಪ ಯಜಮಾನ್ ನಾಗರಾಜ್ ಮತ್ತಿತರಿದ್ದರು.

# ‘ಒಳಮೀಸಲಾತಿ ಜಾರಿ ಮಾಡುವ ಬದ್ಧತೆ ಸರ್ಕಾರಕ್ಕಿಲ್ಲ’

## ತುಮಕೂರಿನಲ್ಲಿ ಒಳಮೀಸಲಾತಿ ಹೋರಾಟದ ಪಾದಯಾತ್ರೆ ಸಂಚಾರ

ತುಮಕೂರು: ಪರಿಶಿಷ್ಟ ಜಾತಿಯಲ್ಲಿ ಜನಸಂಖ್ಯೆ ಆಧಾರದಲ್ಲಿ ಒಳಮೀಸಲಾತಿ ಜಾರಿಗೆ ಸರ್ಕಾರದ ಮೇಲೆ ಒತ್ತಡ ಹಾಕಲು ಹರಿಹರದಿಂದ ರಾಜಧಾನಿ ಬೆಂಗಳೂರಿಗೆ ಹೊರಟಿರುವ ಪಾದಯಾತ್ರೆ ತಂಡ ಭಾನುವಾರ ನಗರಕ್ಕೆ ಆಗಮಿಸಿದಾಗ ವಿವಿಧ ಮುಖಂಡರು ಸ್ವಾಗತಿಸಿ ಬರಮಾಡಿಕೊಂಡರು.

ಈ ವೇಳೆ ಬಿಜಿಎಸ್ ವೃತ್ತದಲ್ಲಿ ನಡೆದ ಸಾರ್ವಜನಿಕ ಸಭೆಯಲ್ಲಿ ಮಾತನಾಡಿದ ವಿಧಾನ ಪರಿಷತ್‌ನ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಒಳಮೀಸಲಾತಿ ಹೋರಾಟ ಇಂದು ನಿನ್ನೆಯದಲ್ಲ ಹಲವಾರು ವರ್ಷಗಳಿಂದ ನಡೆಯುತ್ತಿದೆ. ಪರಿಶಿಷ್ಟ ಜಾತಿಯಲ್ಲಿ ಒಳಮೀಸಲಾತಿ ಜಾರಿ ಮಾಡಲು ಆಯಾ ಸರ್ಕಾರಗಳಿಗೆ ಅವಕಾಶವಿದೆ ಎಂದು ಉಚ್ಚ ನ್ಯಾಯಾಲಯವೇ ತಿಳಿಸಿದೆ, ಆದರೂ ಈಗಿನ ಕಾಂಗ್ರೆಸ್ ಸರ್ಕಾರಕ್ಕೆ ಒಳಮೀಸಲಾತಿ ಜಾರಿ ಮಾಡಲು ಮನಸಿಲ್ಲ, ಅಧಿಕಾರದಲ್ಲಿರುವವವರಿಗೆ ಮಾದಿಗ ಸುಮುದಾಯದ ಸಂಕಷ್ಟಗಳ ಅರಿವಿಲ್ಲ, ನಮ್ಮವರಿಗೆ ಅರಿವಿದ್ದವರೂ ಅಧಿಕಾರಕ್ಕೆ ಅಂಟಿ ಬಾಯಿ ಮುಚ್ಚಿ ಕುಳಿತಿದ್ದಾರೆ ಎಂದು ಟೀಕಿಸಿದರು.



ಪಾದಯಾತ್ರೆಯ ನೇತೃತ್ವ ವಹಿಸಿರುವ ಭಾಸ್ಕರ ಪ್ರಸಾದ್ ಮಾತನಾಡಿ, ನಮ್ಮದು ನ್ಯಾಯುತ ಹೋರಾಟ, ಯಾರ ಹಕ್ಕನ್ನೂ ಕಸಿಯುವ ಉದ್ದೇಶವಲ್ಲ, ನಮ್ಮ ಹಕ್ಕು ಪಡೆಯುವ ಹೋರಾಟ. ಸುಪ್ರೀಂ ಕೋರ್ಟ್ ಒಳಮೀಸಲಾತಿ ಜಾರಿ ಮಾಡಲು ಎಲ್ಲಾ ರಾಜ್ಯ ಸರ್ಕಾರಗಳಿಗೆ ಅವಕಾಶ ನೀಡಿದೆ. ಆದರೆ ನಮ್ಮ ರಾಜ್ಯ ಸರ್ಕಾರ ಒಳಮೀಸಲಾತಿ ಜಾರಿ ಮಾಡದೆ ಆಯೋಗ ರಚಿಸಿ ಅನಗತ್ಯ ವಿಳಂಬ ಧೋರಣೆ ಅನುಸರಿಸುತ್ತಿದೆ. ಹೀಗಾಗಿ ಸರ್ಕಾರ ಹಾಗೂ ಜನಪ್ರತಿನಿಧಿಗಳನ್ನು ಎಚ್ಚರಿಸುವ ಸಲುವಾಗಿ ಈ ಪಾದಯಾತ್ರೆ ಹಮ್ಮಿಕೊಳ್ಳಲಾಗಿದೆ ಎಂದರು.

ಹೈ ಕೋರ್ಟ್ ನ್ಯಾಯವಾದಿ ಅರುಣ್‌ಕುಮಾರ್ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ದಲಿತ ವಿರೋಧಿ, ಒಳಮೀಸಲಾತಿ ವಿರೋಧಿ. ಅವರಿಗೆ ದಲಿತರ ಬಗ್ಗೆ ಕಾಳಜಿ ಇದ್ದಿದ್ದರೆ ಒಳಮೀಸಲಾತಿ ಜಾರಿಗೆ ಪ್ರಯತ್ನ ಮಾಡುತ್ತಿದ್ದರು. ಆದರೆ ಜಾರಿ ಮಾಡಲು ನೆಪ ಹೇಳಿಕೊಂಡು ಮೀನಾಮೇಷ ಎಣಿಸುತ್ತಿರುವುದನ್ನು ಸಹಿಸಲಾಗುವುದಿಲ್ಲ ಎಂದರು.

ಮಾಜಿ ಶಾಸಕ ಗಂಗಹನುಮಯ್ಯ, ಜಿಲ್ಲಾ ಪಂಚಾಯ್ತಿ ಮಾಜಿ ಅಧ್ಯಕ್ಷ ವೈ.ಹೆಚ್.ಹುಚ್ಚಯ್ಯ, ದಲಿತ ಮುಖಂಡರಾದ ಕೋಡಿಯಾಲ ಮಹದೇವ್, ಬಂಡೆ ಕುಮಾರ್, ಕೊಟ್ಟ ಶಂಕರ್, ಪಿ.ಎನ್.ರಾಮಯ್ಯ, ಎನ್.ಆರ್. ಕಾಲೋನಿ ಕಿರಣ್, ಮರಳೂರು ಕೃಷ್ಣಮೂರ್ತಿ, ಮೋಹನ್‌ಕುಮಾರ್, ಮಲ್ಲಿಕ್, ಕ್ಯಾತ್ಸಂದ್ರ ನರಸಿಂಹಮೂರ್ತಿ, ಹನುಮೇಶ್ ಗುಡೂರು ಮೊದಲಾದ ಮುಖಂಡರು ಭಾಗವಹಿಸಿದ್ದರು. ನಗರದ ಪ್ರಮುಖ ರಸ್ತೆಗಳ ಮೂಲಕ ಸಂಚಾರ ಮಾಡಿದ ಬೆಂಗಳೂರಿನತ್ತ ತೆರಳಿತು.

# ಯುವತಿ ಪತ್ತೆಗೆ ಪೊಲೀಸ್ ಮನವಿ

ತುಮಕೂರು(ಕ.ವಾ.)ಮಾ.17ಃ ಗುಬ್ಬಿ ತಾಲ್ಲೂಕು ಕಸಬಾ ಹೋಬಳಿ ಬ್ಯಾಡಗೆರೆ ಗ್ರಾಮದ ಸುಮಾರು 21ವರ್ಷದ ಕೀರ್ತನ ಬಿನ್ ಲೇ॥ ರಾಮು ಎಂಬ ಯುವತಿಯು ಮಾರ್ಚ್ 13ರಂದು ಮನೆಯಿಂದ ಹೋದವಳು ಮರಳಿ ಬಾರದೆ ಕಾಣೆಯಾಗಿದ್ದಾಳೆ ಎಂದು ಗುಬ್ಬಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ಯುವತಿಯು 5 ಅಡಿ ಎತ್ತರ, ಕೋಲು ಮುಖ, ಗೋಧಿ ಮೈಬಣ್ಣ ಹೊಂದಿದ್ದು, ಕನ್ನಡ ಮಾತನಾಡುತ್ತಾಳೆ. ಕಾಣೆಯಾದ ಸಂದರ್ಭದಲ್ಲಿ ಮೆರೂನ್ ಬಣ್ಣದ ಚೂಡಿದಾರ ಟಾಪ್ ಹಾಗೂ ಕಪ್ಪು ಬಣ್ಣದ ಪ್ಯಾಂಟ್ ಧರಿಸಿದ್ದಳು.

ಈಕೆಯ ಬಗ್ಗೆ ಸುಳಿವು ಸಿಕ್ಕಲ್ಲಿ ದೂ.ವಾ.ಸಂ.0816–2272451, 08131–222210ಯನ್ನು ಸಂಪರ್ಕಿಸಬೇಕೆಂದು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

**Printed by:** H.S.PARAMESH, SRI LAKSHMINARASIMHA OFFSET PRINTERS, 7TH CROSS, SRIRAMA NAGARA, TUMAKURU, TUMAKURU DIST., KARNATAKA PIN-572101
**Published by** RADHIKA A.R., D/O RAMAKRISHNAIAH, BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132 **owned by** RADHIKA A.R., D/O RAMAKRISHNAIAH, BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132 **Printed at** SRI LAKSHMINARASIMHA OFFSET PRINTERS, 7TH CROSS, SRIRAMA NAGARA, TUMAKURU, TUMAKURU DIST., KARNATAKA PIN-572101 **and published at** TUMAKURU. BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132
**Editor:** RADHIKA A.R. “**KARNATAKA SUCCESS NO 1**” KANNADA Daily News Paper